ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 11–06–2019

**ಪತ್ರಿಕಾ ಆಮಂತ್ರಣ**

**ಪತ್ರಿಕಾ ಪ್ರಕಟಣೆ**

# ಬೆವಿಕಂ ಗ್ರಾಹಕ ಸಂವಾದ ಸಭೆ

ಬೆಂಗಳೂರು ಜೂನ್ 11 (ಕರ್ನಾಟಕ ವಾರ್ತೆ)

ಬೆಂಗಳೂರು ವಿದ್ಯುತ್ ಸರಬರಾಜು ಕಂಪೆನಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರೆಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 15.06.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಬೇಕಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಪ್ರಧಾನ ವ್ಯವಸ್ಥಾಪಕ(ಗ್ರಾ.ಸಂ.) ಹೆಚ್. ಎಂ. ಶಿವಪ್ರಕಾಶ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## BESCOM Customer Interaction Meeting

**Bengaluru, June 11, (Karnataka Information)**

Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. Customers are requested to attend the meeting and get their electricity related issues resolved by having one to one interaction with concerned BESCOM official.

In this regard Customer Interaction Meeting for the month of June the scheduled on 15.06.2019. In this regard all the esteemed consumers are requested to participate and make use of the opportunity in redressal of complaints says official press release

## <u>ಸಚಿವರ ಪ್ರವಾಸ</u>

ಬೆಂಗಳೂರು ಜೂನ್ 11 (ಕರ್ನಾಟಕ ವಾರ್ತೆ)

ಕಂದಾಯ ಸಚಿವ ಆರ್. ವಿ. ದೇಶಪಾಂಡೆ ಅವರು ಜೂನ್ 14 ರಿಂದ 16 ರವರೆಗೆ ಬೆಳಗಾವಿ, ಬಾಗಲಕೋಟೆ, ಧಾರವಾಡ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಜೂನ್ 16 ರಂದು ನಗರಕ್ಕೆ ಹಿಂದಿರುಗಲಿದ್ದಾರೆ.

# <u>ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮ ಮುಂದೂಡಿಕೆ</u>

ಬೆಂಗಳೂರು ಜೂನ್ 11 (ಕರ್ನಾಟಕ ವಾರ್ತೆ)

ಜ್ಞಾನಪೀಠ ಪ್ರಶಸ್ತಿ ವಿಜೇತ ಹೆಸರಾಂತ ಸಾಹಿತಿ, ನಾಟಕಕಾರ ಡಾ. ಗಿರೀಶ್ ಕಾರ್ನಾಡ್ ಅವರ ನಿಧನದಿಂದ ರಾಜ್ಯದಲ್ಲಿ ಶೋಕಾಚರಣೆ ಇದ್ದ ಕಾರಣ ಜೂನ್ 11 ರಂದು ನಡೆಯಬೇಕಿದ್ದ ಪ್ರಶಿಕ್ಷಣಾರ್ಥಿಗಳ ಪಥಸಂಚಲನ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು.

ಸದರಿ ಕಾರ್ಯಕ್ರಮವನ್ನು ಜೂನ್ 14 ರಂದು ಬೆಳಿಗ್ಗೆ 6.30 ಗಂಟೆಗೆ ಥಣಿಸಂದ್ರದ ಪೊಲೀಸ್ ತರಬೇತಿ ಶಾಲೆ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತರಬೇತಿ ಶಾಲೆಯ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.